ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE

ಇಂದಿನಿಂದಲೇ ಜಾರಿ | ಮೇ 4ರವರೆಗೆ ರಾತ್ರಿ ಮತ್ತು ವೀಕೆಂಡ್ ಕರ್ಫ್ಯೂ | ಮಾಲ್ ಕ್ಲೋಸ್, ಕಿರಾಣಿ ಅಂಗಡಿ ಓಪನ್

ಹೋಟೆಲ್‌ಗಳಲ್ಲಿ ಪಾರ್ಸೆಲ್ ಮಾತ್ರ | ದೇಗುಲಗಳಲ್ಲಿ ಪೂಜೆ ಮಾತ್ರ | ಥಿಯೇಟರ್ ಬಂದ್

# ರಾಜ್ಯಾದ್ಯಂತ ಕಠಿಣ ನಿರ್ಬಂಧ

### ನೈಟ್ ಕರ್ಫ್ಯೂ

ರಾಜ್ಯಾದ್ಯಂತ ಪ್ರತಿದಿನ ರಾತ್ರಿ 9ರಿಂದ ಬೆಳಗ್ಗೆ 6ರ ವರೆಗೆ

ಶುಕ್ರವಾರ ರಾತ್ರಿ 9ರಿಂದ ಸೋಮವಾರ ಬೆಳಗ್ಗೆ 6ರ ವರೆಗೆ

**ಬೆಂಗಳೂರು:** ಕೋವಿಡ್ ನಿಯಂತ್ರಣಕ್ಕೆ ಕಠಿಣ ಕ್ರಮ ಕೈಗೊಳ್ಳಲು ನಿರ್ಧರಿಸಿರುವ ಸರಕಾರ, ರಾಜ್ಯಾದ್ಯಂತ ನೈಟ್ ಕರ್ಫ್ಯೂ, ವಾರಾಂತ್ಯದ ಕರ್ಫ್ಯೂ ಸೇರಿದಂತೆ ಹಲವು ನಿರ್ಬಂಧಗಳನ್ನು ಘೋಷಿಸಿದೆ. ಈ ಸಂಬಂಧ ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್ ಪರಿಷ್ಕೃತ ಮಾರ್ಗಸೂಚಿ ಹೊರಡಿಸಿದ್ದಾರೆ. ಬುಧವಾರದಿಂದ, (ಏ. 21) ಮೇ 4ರ ವರೆಗೆ ಅನ್ವಯವಾಗುವಂತೆ ಈ ಕ್ರಮ ಜಾರಿಯಲ್ಲಿ ಇರಲಿದೆ.

ರಾಜ್ಯದಲ್ಲಿ ಕೋವಿಡ್ ಹರಡುವಿಕೆ ತಡೆಯುವ ಸಂಬಂಧ ರಾಜ್ಯಪಾಲರ ಅಧ್ಯಕ್ಷತೆಯಲ್ಲಿ ಸರ್ವಪಕ್ಷಗಳ ಸಭೆ ನಡೆಸಲಾಯಿತು. ಈ ಸಭೆ ಮುಕ್ತಾಯದ ಬೆನ್ನಿಗೇ ಸರಕಾರದ. ಕಡೆಯಿಂದ ಕಠಿಣ ಮಾರ್ಗಸೂಚಿ ಹೊರಬಿದ್ದಿದೆ.



- ಶಾಲೆ ಕಾಲೇಜು, ಕೋಚಿಂಗ್ ಸೆಂಟರ್, ತರಬೇತಿ ಕೇಂದ್ರ ಬಂದ್.
- ಚಿತ್ರಮಂದಿರ, ಶಾಪಿಂಗ್ ಮಾಲ್, ಜಿಮ್, ಸ್ಪಾ, ಈಜುಕೊಳ, ಕ್ರೀಡಾ ಸಂಕೀರ್ಣ, ಅಮ್ಯೂಸ್‌ಮೆಂಟ್ ಪಾರ್ಕ್, ಸಭಾಂಗಣ, ಅಸೆಂಬ್ಲಿ ಹಾಲ್‌ಗೆ ಬೀಗ
- ಎಲ್ಲ ಬಗೆಯ ಧಾರ್ಮಿಕ ಸ್ಥಳಗಳಿಗೆ ಸಾರ್ವಜನಿಕರ ಪ್ರವೇಶ ನಿಷೇಧ. ಆದರೆ ದೈನಂದಿನ ಪೂಜಾ ಕೈಂಕರ್ಯಕ್ಕೆ ತಡೆ ಇಲ್ಲ
- ಹೋಟೆಲ್, ರೆಸ್ಟೋರೆಂಟ್‌ಗಳಲ್ಲಿ ಪಾರ್ಸೆಲ್‌ಗೆ ಮಾತ್ರ ಅವಕಾಶ. ಲಿಕ್ಕರ್ ಶಾಪ್, ಬಾರ್ ಅಂಡ್ ರೆಸ್ಟೋರೆಂಟ್‌ಗೂ ಇದೇ ನಿಯಮ
- ಸಾಮಾಜಿಕ, ರಾಜಕೀಯ, ಕ್ರೀಡೆ, ಮನೋರಂಜನೆ, ಶೈಕ್ಷಣಿಕ, ಸಾಂಸ್ಕೃತಿಕ, ಧಾರ್ಮಿಕ ಹಾಗೂ ಇತರ ಕಾರ್ಯಕ್ರಮಗಳಿಗೆ ನಿಷೇಧ
- ಲಾಡ್ಜ್‌ಗಳಲ್ಲಿ ಈಗಾಗಲೇ ತಂಗಿರುವ ಅತಿಥಿಗಳಿಗೆ ಮಾತ್ರ ಸೇವೆ ಒದಗಿಸಲು ಅವಕಾಶ.



- ಕೋವಿಡ್ ಸುರಕ್ಷಾ ನಿಯಮಗಳೊಂದಿಗೆ ಎಲ್ಲ ಬಗೆಯ ನಿರ್ಮಾಣ, ದುರಸ್ತಿ ಚಟುವಟಿಕೆಗೆ ಅನುಮತಿ
- ಮುಂಗಾರು ಪೂರ್ವ ಕೃಷಿ ಚಟುವಟಿಕೆಗಳಿಗೂ ಯಾವುದೇ ನಿರ್ಬಂಧವಿಲ್ಲ

### ಕೈಗಾರಿಕೆ ತೆರೆಯುವ ಅವಕಾಶ

- ಎಲ್ಲ ಬಗೆಯ ಕೈಗಾರಿಕೆಗಳು, ಸಂಸ್ಥೆಗಳು, ಉತ್ಪಾದನಾ ಘಟಕಗಳು ಕಾರ್ಯ ನಿರ್ವಹಿಸಬಹುದು.
- ಸಿಬ್ಬಂದಿ ಓಡಾಟಕ್ಕೆ ಸಂಸ್ಥೆಗಳಿಂದ ಪಡೆದುಕೊಂಡ ಐಡಿ ಕಾರ್ಡ್ ತೋರಿಸುವುದು ಕಡ್ಡಾಯ.

### ಕಿರಾಣಿ ಅಂಗಡಿ, ಸೆಲೂನ್‌ಗೆ ಅಡ್ಡಿ ಇಲ್ಲ

- ಪಡಿತರ ಅಂಗಡಿ ಹಾಗೂ ದಿನಸಿ, ಹಣ್ಣು-ತರಕಾರಿ, ಹಾಲಿನ ಬೂತ್, ಮೀನು-ಮಾಂಸ, ಪಶು ಆಹಾರ ಅಂಗಡಿಗಳ ಸೇವೆ ಅಬಾಧಿತ.
- ಮೈದಾನ ಇಲ್ಲವೇ ತೆರೆದ ಪ್ರದೇಶದಲ್ಲಿ ಮಾತ್ರ ಸಗಟು ತರಕಾರಿ/ಹಣ್ಣು/ಹೂವಿನ ವ್ಯಾಪಾರ ನಡೆಸಲು ಅನುಮತಿ. ಕಟ್ಟಡದಲ್ಲಿ ನಡೆಸುವಂತಿಲ್ಲ
- ಬ್ಯಾಂಕ್, ವಿಮಾ ಕಚೇರಿ, ಎಟಿಎಂ, ಮುದ್ರಣ ಮತ್ತು ಎಲೆಕ್ಟ್ರಾನಿಕ್ ಮಾಧ್ಯಮ, ಷೇರು ವಿನಿಮಯ ಸೇವಾ ಕೇಂದ್ರಗಳಿಗೆ ಅವಕಾಶ.

### ರಾಜ್ಯದೊಳಗೆ ಸಂಚಾರಕ್ಕೆ ಅಡ್ಡಿ ಇಲ್ಲ



- ರಾಜ್ಯದೊಳಗೆ ವ್ಯಕ್ತಿಗಳ ಸಂಚಾರ ಹಾಗೂ ಸರಕು ಸಾಗಣೆಗೆ ಮುಕ್ತ ಅವಕಾಶ. ಯಾವುದೇ ಪೂರ್ವಾನುಮತಿ ಬೇಕಿಲ್ಲ.
- ಆದರೆ ಬೇರೆ ರಾಜ್ಯಗಳಿಂದ ಬರುವವರು ಕೋವಿಡ್ ನಿಯಮಗಳಿಗೆ ಒಳಪಡುವುದು ಕಡ್ಡಾಯ.
- ಮೆಟ್ರೊ, ಬಸ್, ಕ್ಯಾಬ್, ಆಟೋ ಸಂಚಾರಕ್ಕೆ ಅವಕಾಶ. ಒಟ್ಟು ಆಸನ ಸಾಮರ್ಥ್ಯ 50% ಮಾತ್ರ.



- ಮದುವೆ ಸಮಾರಂಭಗಳಿಗೆ ಕೇವಲ 50 ಜನರಿಗೆ ಅವಕಾಶ, ಅಂತ್ಯಕ್ರಿಯೆಯಲ್ಲಿ 20 ಮಾತ್ರ.
- ಶನಿವಾರ ಭಾನುವಾರ ದಿನಸಿ, ತರಕಾರಿ, ಹಾಲು ಅಂಗಡಿಗಳು ಬೆಳಗ್ಗೆ 6ರಿಂದ 10ರವರೆಗೆ ಮಾತ್ರ ಓಪನ್
- ಬೆಂಗಳೂರಿನ ಮಾರುಕಟ್ಟೆಗಳನ್ನು 14 ದಿನಗಳವರೆಗೂ ಬೇರೆ ಕಡೆಗೆ ಸ್ಥಳಾಂತರಿಸಲಾಗಿದೆ.

ಸರ್ವಪಕ್ಷ ಸಭೆಯಲ್ಲಿ ಲಾಕ್‌ಗೇ ಬಹುಮತ

ರಾಜ್ಯದಲ್ಲಿ 21 ಸಾವಿರ ದಾಟಿದ ಕೇಸ್

ವೀಕೆಂಡ್, ನೈಟ್ ಕರ್ಫ್ಯೂ ನಿರ್ಬಂಧಗಳೇನು?

ಮುಂದಿನ ಮೂರು ವಾರ ನಿರ್ಣಾಯಕ

ದೇಶದಲ್ಲಿ 45 ಲಕ್ಷ ಡೋಸ್ ಲಸಿಕೆ ವ್ಯರ್ಥ